ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಅಂಧ ತಾಯಂದಿರಿಗೆ ಮಾಸಿಕ ಶಿಶುಪಾಲನಾ ಭತ್ಯೆಗಳ ಬಗ್ಗೆ

ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):-

703 (720) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2020-21ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಅಂಧ ತಾಯಂದಿರಿಗೆ ಮಾಸಿಕ 2000 ರೂ.ಗಳಂತೆ ಶಿಶುಪಾಲನಾ ಭತ್ಯೆಯನ್ನು ಸರ್ಕಾರವು ಮಗುವಿನ ಮೊದಲ ಎರಡು ವರ್ಷದವರೆಗೆ ನೀಡುತ್ತಿದ್ದು, ಈ ಭತ್ಯೆಯನ್ನು ಮಕ್ಕಳ ಮೊದಲ ಐದು ವರ್ಷದವರೆಗೆ ನೀಡಲಾಗುವುದೆಂದು ಘೋಷಿಸಿದ್ದು, ಇದು ಅನುಷ್ಠಾನದಲ್ಲಿದೆಯೇ ;

(ಆ) ಅನುಷ್ಠಾನಕ್ಕೆ ಬಂದಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳಿಗೆ ವಿತರಿಸಲಾಗಿದೆ ;

(ಇ) ವಿತರಿಸದಿದ್ದಲ್ಲಿ, ಯಾವಾಗ ವಿತರಿಸಲಾಗುವುದು ? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)